ವರ್ಷಗಳಿಗೆ ಪ್ರತಿ ವರ್ಷಕ್ಕೆ 5000 ಶಿಕ್ಷಕರ ಹುದ್ದೆಯಂತೆ 1993-94 ಮತ್ತು 94-95ರಲ್ಲಿ ಮಂಜೂರಾದ ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. 1995-96ನೇ ಸಾಲಿನಲ್ಲಿ ಮಂಜೂರಾದ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಇಲ್ಲ.

ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿ.

758 - ಶ್ರೀ ರಾಮಲಿಂಗಾ ರಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸ ಶಿಕ್ಷಣ ನೀತಿಯನ್ನು ಜಾರಿಗ ತರಲು ಸರ್ಕಾರ ಉದ್ದೇಶಿಸಿದೆಯೇ?

ಆ) ಮಹಾರಾಷ್ಟ್ರದಲ್ಲಿ ಹೊಸ ಶಿಕ್ಷಣ ನೀತಿಯನ್ನು ರೂಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಅದೇ ರೀತಿ, ರಾಜ್ಯದಲ್ಲೂ ಸಹ ಹೊಸ ಶಿಕ್ಷಣ ನೀತಿಯನ್ನು ಮುಂದಿನ ಮೂರು ತಿಂಗಳೊಳಗೆ ಜಾರಿಗ ತರಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಹೆಚ್.ಸಿ. ಗೂಳಿಹಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) ಇದು ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಅಧ್ಯಕ್ಷರು : ಸಭೆಯ ಮುಂದೆ ಮಂಡಿಸಲಾಯಿತು.

ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿದೆ.

ಕರ್ನಾಟಕ ವಿಧಾನ ಪರಿಷತ್ತು ದಿನಾಂಕ 5ನೇ ಮಾರ್ಚ್ 1996ರಂದು ಕರ್ನಾಟಕದ ಭೂ ಸುಧಾರಣೆಗಳ (ತಿದ್ದುಪಡಿ) ಅಧ್ಯಾದೇಶ, 1996ನ್ನು ಅನುಮೋದಿಸದೇ ತಿರಸ್ಕರಿಸಲಾಯಿತು ಎಂದು ತಿಳಿಸುತ್ತೇನೆ.

ವರದಿಗಳನ್ನು ಒಪ್ಪಿಸುವುದು.

ಶ್ರೀ ಬಿ.ಕೆ. ನಾಗಪ್ಪ (ಅಧ್ಯಕ್ಷರು, ಲೋಕೋಪಯೋಗಿ ಮತ್ತು ನೀರಾವರಿ ಇಲಾಖಾ ವಿಷಯ ಸಮಿತಿ) : ಮಾನ್ಯ ಅಧ್ಯಕ್ಷರೇ, ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆಯಾದ ಪ್ರದೇಶದ ಜನರಿಗೆ